RNU AIR DHARWAD

MARCH 26, 2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ–ಪ್ರದೇಶ ಸಮಾಚಾರ

<><><>

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು

<><><>

- ವಿಕ್ರಮ್ ಲ್ಯಾಂಡರ್ ಇಳಿದ ಸ್ಥಳ, 'ಶಿವಶಕ್ತಿ' ಹೆಸರಿಗೆ, ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಒಕ್ಕೂಟದಿಂದ, ಮಾನ್ಯತೆ.
- ಕಾನೂನು ಸೇವೆ ಪಡೆಯಲು ಅರ್ಹರಾದವರಿಗೆ, ಪ್ರಾಧಿಕಾರದಿಂದ ಉಚಿತ ನೆರವು – ನ್ಯಾಯಮೂರ್ತಿ ಸಂಜೀವ್ ಖನ್ನಾ.
- ಧಾರವಾಡ ಸೇರಿದಂತೆ, ಕಿತ್ತೂರು ಹಾಗೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಇಂದು ರಂಗ ಪಂಚಮಿ.
- 18ನೇ ಲೋಕಸಭಾ ಚುನಾವಣೆ: ಬಾಗಲಕೋಟೆ ಜಿಲ್ಲೆ ಅಮೀನಗಡದಲ್ಲಿ ಗಮನ ಸೆಳೆದ, ಸ್ವೀಪ್ ಹಲಗೆ ಹಬ್ಬ.

<><><>

ಈಗ ವಾರ್ತೆಗಳ ವಿವರ

<><><>

ಚಂದ್ರಯಾನ–3ರ ವಿಕ್ರಮ್ ಲ್ಯಾಂಡರ್ ಇಳಿದ ಸ್ಥಳಕ್ಕೆ ನಾಮಕರಣ ಮಾಡಲಾಗಿದ್ದ 'ಶಿವಶಕ್ತಿ' ಹೆಸರಿಗೆ, ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಒಕ್ಕೂಟ – ಐ.ಎ.ಯು. ಮಾನ್ಯತೆ ನೀಡಿದೆ. 'ಶಿವಶಕ್ತಿ' ಎಂಬ ಸಂಯುಕ್ತ ಪದ, ಭಾರತೀಯ ಪುರಾಣದಲ್ಲಿ ವರ್ಣಿಸಿದಂತೆ, ಶಿವ ಎಂದರೆ ಪುರುಷ ಮತ್ತು ಶಕ್ತಿ ಎಂದರೆ ಸ್ತ್ರೀ ಆಗಿದ್ದು, ಪ್ರಕೃತಿಯ ದ್ವಿತ್ವವನ್ನು ವ್ಯಾಖ್ಯಾನಿಸುತ್ತದೆ ಎಂದು ಗೆಸೆಟಿಯರ್ ವಿವರಿಸಿದೆ. ಬೆಂಗಳೂರಿನ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ, ಟೆಲಿಮೆಟ್ರಿ ಟ್ರ್ಯಾಕಿಂಗ್ ಆ್ಯಂಡ್ ಕಮಾಂಡ್ ನೆಟ್‌ವರ್ಕ್‌ನಲ್ಲಿ, 2023ರ ಆಗಸ್ಟ್ 26ರಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ವಿಕ್ರಮ್ ಲ್ಯಾಂಡರ್ ಇಳಿದ ಸ್ಥಳಕ್ಕೆ 'ಶಿವಶಕ್ತಿ' ಎಂದು ನಾಮಕರಣ ಮಾಡಿದ್ದರು.

<><><>

ಆರ್ಥಿಕವಾಗಿ ಹಿಂದುಳಿದವರಿಗೆ ಹಾಗೂ ಕಾನೂನು ಸೇವೆ ಪಡೆಯಲು ಅರ್ಹರಾದ ದಮನಿತರಿಗೆ, ಕಾನೂನು ಸೇವೆಗಳ ಪ್ರಾಧಿಕಾರದಿಂದ, ಉಚಿತ ಕಾನೂನು ನೆರವು ನೀಡಲಾಗುತ್ತಿದೆ ಎಂದು, ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಸಂಜೀವ್ ಖನ್ನಾ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲೂಕಿನ, ಜಾಲಿಗೆ ಗ್ರಾಮ ಪಂಚಾಯಿತಿ ಕಟ್ಟಡದಲ್ಲಿ, ನೂತನ ಕಾನೂನು ಸಲಹಾ ಕೇಂದ್ರಕ್ಕೆ ಚಾಲನೆ ನೀಡಿ, ಮಾತನಾಡಿದರು. ಲೋಕ ಅದಾಲತ್ ಮೂಲಕ ಪ್ರಕರಣಗಳನ್ನು ಶೀಘ್ರ ಇತ್ಯರ್ಥ ಪಡಿಸಿ, ಕಡಿಮೆ ಖರ್ಚಿನಲ್ಲಿ ನ್ಯಾಯ ದೊರಕಿಸಿ ಕೊಡಲಾಗುತ್ತಿದೆ. ಪ್ರಾಧಿಕಾರದಿಂದ ಗ್ರಾಮೀಣ ಪ್ರದೇಶದಲ್ಲಿ ಕಾನೂನು ಅರಿವು ಕಾರ್ಯಕ್ರಮ ಸತತ ಆಯೋಜಿಸಲಾಗುತ್ತಿದೆ ಎಂದು ನ್ಯಾಯಮೂರ್ತಿ ಖನ್ನಾ ಹೇಳಿದರು.

<><><>

ಬರಪೀಡಿತ ತಾಲೂಕು ಎಂದು, ಘೋಷಿಸಲಾದ ಧಾರವಾಡ ಜಿಲ್ಲೆ ಕಲಘಟಗಿ ತಾಲೂಕಿನ ಬೆಲವಂತರ, ಸೋಮನಕೊಪ್ಪ ಹಾಗೂ ಮುಕ್ಕಲ ಗ್ರಾಮಗಳಿಗೆ, ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ ನೀಡಿ, ಬರ ಪರಿಸ್ಥಿತಿ ಪರಿಶೀಲಿಸಿದರು. ಬಳಿಕ ಹುಬ್ಬಳ್ಳಿಗೆ ಕುಡಿಯುವ ನೀರು ಒದಗಿಸುವ ನೀರಸಾಗರ ಹಾಗೂ ಕಲಘಟಗಿ ಪಟ್ಟಣಕ್ಕೆ ನೀರೊದಗಿಸುವ, ಬೆಣಚಿ ಕೆರೆಯ ನೀರಿನ ಮಟ್ಟ ವೀಕ್ಷಿಸಿದ ಜಿಲ್ಲಾಧಿಕಾರಿ, ಗ್ರಾಮ ಮಟ್ಟದ ಅಧಿಕಾರಿಗಳು ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸುವಂತೆ ಸೂಚಿಸಿದರು.

<><><>

ಮನಸೂರ ಗ್ರಾಮದ ಕುಬೇರಪ್ಪ ಅಗಸರ ಅವರು ಸಾಕಿದ ಆಕಳ ಕರುವನ್ನು, ಚಿರತೆ ಕೊಂದ ಹಿನ್ನೆಲೆ, ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಪರಿಹಾರ ವಿತರಿಸಿ, ಚಿರತೆ ಬಂಧಿಸಲು ಕ್ರಮ ಕೈಗೊಳ್ಳುವಂತೆ, ಅರಣ್ಯಾಧಿಕಾರಿಗಳಿಗೆ ಸೂಚಿಸಿದರು.

<><><>

ಧಾರವಾಡ ಸೇರಿದಂತೆ, ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಹಲವು ಇಂದು ರಂಗ ಹಾಗೂ ವಸಂತ ಪಂಚಮಿ ಜರುಗಲಿದೆ.

<><><>

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ನಿನ್ನೆ ಹುಣ್ಣಿಮೆ ನಿಮಿತ್ತ ಕಾಮಣ್ಣನ ಪ್ರತಿಕೃತಿ ದಹನದ ಜೊತೆಗೆ, ಹೋಳಿ ಹಬ್ಬ ಆಚರಿಸಲಾಗಿದೆ ಎಂದು ನಮ್ಮ ಪ್ರತಿನಿಧಿಗಳು ವರದಿ ಮಾಡಿದ್ದಾರೆ.

<><><>

ಕದರಿ ಹುಣ್ಣಿಮೆ ಅಂಗವಾಗಿ, ದೊಡ್ಡಬಳ್ಳಾಪುರ ತಾಲೂಕಿನ ತೂಬಗೆರೆಯಲ್ಲಿ ಇತಿಹಾಸದ ಪ್ರಸಿದ್ಧ ಶ್ರೀ ಪ್ರಸನ್ನ ಲಕ್ಷ್ಮೀ ವೆಂಕಟರಮಣ ಸ್ವಾಮಿ ಬ್ರಹ್ಮರಥೋತ್ಸವ ವಿಜೃಂಭಣೆಯಿಂದ ನಡೆಯಿತು.

<><><>

ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಪಕ್ಷ ನಾಯಕ ಆರ್.ಅಶೋಕ್ ಸೇರಿದಂತೆ, ಗಣ್ಯರು ನಾಡಿನ ಜನತೆಗೆ ಬಣ್ಣಗಳ ಹಬ್ಬ ಹೋಳಿ ಶುಭಾಶಯ ಕೋರಿದ್ದಾರೆ.

<><><>

ರಾಸಾಯನಿಕ ಮಿಶ್ರಿತ ಬಣ್ಣಗಳು ಕಣ್ಣಿಗೆ ಹಾನಿ ಮಾಡುವ ಸಾಧ್ಯತೆ ಇದ್ದು, ಹೋಳಿ ಹಬ್ಬದ ಆಚರಣೆ ವೇಳೆ ಹೂವು, ತರಕಾರಿ ಮತ್ತು ಇತರೆ ನೈಸರ್ಗಿಕ ಮೂಲಗಳಿಂದ ತಯಾರಿಸಿದ ನೈಸರ್ಗಿಕ ಬಣ್ಣಗಳನ್ನೇ ಬಳಸುವಂತೆ, ನೇತ್ರ ತಜ್ಞರು ಮನವಿ ಮಾಡಿದ್ದಾರೆ.

<><><>

ಹಿರಿಯ ನೇತ್ರ ತಜ್ಞೆ , ಧಾರವಾಡದ ಡಾಕ್ಟರ್ ರಶ್ಮಿ ಕುದರಿ, ಮುಂಜಾಗ್ರತೆ ವಹಿಸುವಂತೆ, ಆಕಾಶವಾಣಿ ಮೂಲಕ ಮನವಿ ಮಾಡಿದ್ದಾರೆ.

<><><>

ನೇತ್ರ ತಜ್ಞ ಡಾಕ್ಟರ್ ಧ್ವನಿ 40 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ವಿಶೇಷ ಚೇತನರಿಗೆ ಮತದಾನ ಮಾಡಲು ಅನುವಾಗುವ, ಸಕ್ಷಮ ಆ್ಯಪ್ ಅನ್ನು, ಕೇಂದ್ರ ಚುನಾವಣಾ ಆಯೋಗ ಬಿಡುಗಡೆ ಮಾಡಿದೆ. ವಿಕಲಾಂಗಚೇತನರು ಸೌಲಭ್ಯ ಪಡೆಯಲು, ಸಕ್ಷಮ ಆ್ಯಪ್ ನಲ್ಲಿ ತಮ್ಮ ವಿವರಗಳನ್ನು ದಾಖಲಿಸುವಂತೆ, ಮುಖ್ಯ ಚುನಾವಣಾ ಆಯುಕ್ತರು ಕೋರಿದ್ದಾರೆ. ಸಕ್ಷಮ ಮೊಬೈಲ್ ಅಪ್ಲಿಕೇಶನ್ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಹಾವೇರಿ ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ.

<><><>

ರಘುನಂದನ್ ಮೂರ್ತಿ ಧ್ವನಿ 49 ಸೆಕೆಂದುಗಳು

<><><>

18ನೇ ಲೋಕಸಭೆಗೆ ಚುನಾವಣೆ, ರಾಜ್ಯಾದ್ಯಂತ 2 ಹಂತಗಳಲ್ಲಿ ನಡೆಯಲಿದೆ. ರಾಜಧಾನಿ ಬೆಂಗಳೂರು ಸೇರಿದಂತೆ, ಒಟ್ಟು 14 ಕ್ಷೇತ್ರಗಳಿಗೆ ಏಪ್ರಿಲ್ 26 ರಂದು ಮೊದಲ ಹಂತದ ಮತದಾನ ನಡೆಯಲಿದೆ. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ನಿನ್ನೆ ಕೊನೆಯ ದಿನವಾಗಿತ್ತು.

<><><>

ಮೇ 7 ರಂದು ಇನ್ನುಳಿದ 14 ಕ್ಷೇತ್ರಗಳಿಗೆ ಮತದಾನ ಜರುಗಲಿದ್ದು, ಮತದಾರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು, ಅಥವಾ ತಿದ್ದುಪಡಿ ಮಾಡಲು, ಏಪ್ರಿಲ್ 9ರ ವರೆಗೆ ಅವಕಾಶ ಕಲ್ಪಿಸಲಾಗಿದೆ.

<><><>

ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿಯಾಗಿದ್ದರೆ, ಮತದಾರರ ಗುರುತಿನ ಚೀಟಿ ಇಲ್ಲದಿದ್ದರೂ, ಚುನಾವಣಾ ಆಯೋಗ ಸೂಚಿಸಿರುವ ದಾಖಲೆಗಳನ್ನು ತೋರಿಸಿ, ಮತದಾನ ಮಾಡಬಹುದು.

<><><>

ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ, ಆಯ್ದ ಕೆಲ ಜಿಲ್ಲಾಡಳಿತಗಳು ಕೈಗೊಳ್ಳುತ್ತಿರುವ ಚುನಾವಣಾ ಪೂರ್ವ ಸಿದ್ಧತೆಗಳ ಕುರಿತು, ಈಗ ಮಾಹಿತಿ.

<><><>

18ನೇ ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆ, ಉಡುಪಿ ಜಿಲ್ಲೆಯಲ್ಲಿ ಏಪ್ರಿಲ್ 26 ರಂದು ಮತದಾನ ಹಾಗೂ ಜೂನ್ 4 ರಂದು ಮತ ಎಣಿಕೆ ನಡೆಯಲಿದೆ ಎಂದು, ಚುನಾವಣಾ ಆಯೋಗ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅಬಕಾರಿ ಕಾಯ್ದೆ ಸಾಮಾನ್ಯ ನಿಯಮಾವಳಿ ಅಡಿ, ಪ್ರತಿಬಂಧ ವಿಧಿಸಿ, ಜಿಲ್ಲಾಧಿಕಾರಿ ಡಾಕ್ಟರ್ ಕೆ. ವಿದ್ಯಾಕುಮಾರಿ ಆದೇಶಿಸಿದ್ದಾರೆ.

<><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ, ಚುನಾವಣಾ ನೀತಿ ಸಂಹಿತೆ ಜಾರಿಯಾದ ದಿನದಿಂದ ಇಲ್ಲಿಯ ವರೆಗೆ, 5 ಲಕ್ಷ 8 ಸಾವಿರದ 296 ರೂಪಾಯಿ ಮೌಲ್ಯದ ಮದ್ಯ ಹಾಗೂ 5 ಲಕ್ಷ 94 ಸಾವಿರದ 950 ರೂಪಾಯಿ ಮೌಲ್ಯದ ಅಂದಾಜು 2 ಕಿಲೋ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

<><><>

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆ 2ನೇ ಹಂತದಲ್ಲಿ ನಡೆಯಲಿದೆ. ಪರಿಶಿಷ್ಟ ಜಾತಿ ಅಭ್ಯರ್ಥಿಗೆ ಮೀಸಲಿರುವ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ, ಮೊಳಕಾಲ್ಮೂರು, ಚಳ್ಳಕೆರೆ, ಚಿತ್ರದುರ್ಗ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ ಹಾಗೂ ತುಮಕೂರು ಜಿಲ್ಲೆಯ ಸಿರಾ ಮತ್ತು ಪಾವಗಡ ಸೇರಿದಂತೆ, ಒಟ್ಟು 8 ವಿಧಾನಸಭಾ ಕ್ಷೇತ್ರಗಳಿವೆ.

<><><>

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆ, ಮೈಸೂರಿನಲ್ಲಿ ಸ್ವೀಪ್ ಚಟುವಟಿಕೆ ಐಕಾನ್‌ಗಳಾಗಿ, ಕ್ರಿಕೆಟಿಗ ಜಾವಗಲ್ ಶ್ರೀನಾಥ್ ಹಾಗೂ ಪ್ಯಾರಾ ಅಥ್ಲೀಟ್ ಮಹೇಂದ್ರ ಎಂ. ಆಯ್ಕೆಯಾಗಿದ್ದಾರೆ.

<><><>

ಬಾಗಲಕೋಟೆ ಜಿಲ್ಲೆ ಅಮೀನಗಡದಲ್ಲಿ ನಡೆದ ಹೋಳಿ ಉತ್ಸವದಲ್ಲಿ, 'ಯುವ ಜನತೆ ಮತ ಚಲಾಯಿಸಿ' ಎಂಬ ಸಂದೇಶದ ಹಲಗೆ ಹಬ್ಬ, ಗಮನ ಸೆಳೆಯಿತು.

<><><>

ಸಾರ್ವಜನಿಕರು ಸಿ–ವಿಜಿಲ್ ಆಪ್ ಮಾತ್ರವಲ್ಲದೆ, ಉಚಿತ ಸಹಾಯವಾಣಿ ಸಂಖ್ಯೆ 1–9–5–0 ಗೆ ಕರೆ ಮಾಡಿ, ಚುನಾವಣಾ ಅಕ್ರಮಗಳ ಬಗ್ಗೆ ದೂರು ನೀಡಬಹುದು ಎಂದು, ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

<><><>

ಹಾಸ್ಯ ಕಲಾವಿದ ಬಸವರಾಜ್ ಮಹಾಮನಿ, ಮಾಯಾ ಎಸ್.ಆರ್.ನಾಯಕ್ ಹಾಗೂ ಗಂಗಾಧರ್ ಹೊಟ್ಟಿ ಅವರನ್ನು, ಯಾದಗಿರಿ ಜಿಲ್ಲಾ ಚುನಾವಣಾ ರಾಯಭಾರಿಗಳನ್ನಾಗಿ ಆಯ್ಕೆ ಮಾಡಲಾಗಿದೆ. ನೈತಿಕ ಹಾಗೂ ಸಕ್ರಿಯ ಮತದಾನದಲ್ಲಿ ಪಾಲ್ಗೊಳ್ಳುವಂತೆ, ಕಲಾವಿದರು ಪ್ರೋತ್ಸಾಹಿಸಲಿದ್ದಾರೆ ಎಂದು, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಗರಿಮಾ ಪನ್ವಾರ್ ತಿಳಿಸಿದ್ದಾರೆ.

<><><>

ದಕ್ಷಿಣಕನ್ನಡದಂಥ ಪ್ರಗತಿಶೀಲ ಜಿಲ್ಲೆಯನ್ನು ಪ್ರತಿನಿಧಿಸುವ ಅವಕಾಶ ದೊರೆತದ್ದು ತಮ್ಮ ಸೌಭಾಗ್ಯ ಎಂದು, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದ್ದಾರೆ. ಮಂಗಳೂರಿನ ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರಕ್ಕೆ ಭೇಟಿ ನೀಡಿ, ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

<><><>

ರಾಯಚೂರು ಜಿಲ್ಲೆ, ಸಿರವಾರ ತಾಲೂಕಿನಲ್ಲಿ, ಮತದಾರರ ಜಾಗ್ರತಿಗಾಗಿ, ತಾಲೂಕು ಆಡಳಿತದ ವತಿಯಿಂದ ಸ್ವೀಪ್ ಚಟುವಟಿಕೆಗಳು ನಡೆದವು.

<><><>

ತುಮಕೂರು ಜಿಲ್ಲೆಯಲ್ಲಿ, ನೀತಿ ಸಂಹಿತೆ ಉಲ್ಲಂಘನೆ ಹಿನ್ನೆಲೆ, 59 ಲಕ್ಷ 12 ಸಾವಿರದ 249 ರೂಪಾಯಿ ಮೌಲ್ಯದ ಮದ್ಯ ವಶ ಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

<><><>

ಕ್ರೀಡಾ ಸುದ್ದಿ

<><><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ 4 ವಿಕೆಟ್‌ಗಳ ಜಯ ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ತಂಡ, ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್‌ಗಳ ನಷ್ಟಕ್ಕೆ 176 ರನ್ ಗಳಿಸಿತು. ಈ ಗುರಿ ಬೆನ್ನತ್ತಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, 19.2 ಓವರ್‌ಗಳಲ್ಲಿ 6 ವಿಕೆಟ್‌ಗಳನ್ನು ಕಳೆದುಕೊಂಡು, 178 ರನ್ ಗಳಿಸುವ ಮೂಲಕ ಗೆಲುವು ದಾಖಲಿಸಿತು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದ ಕೈವಾರ ಕ್ಷೇತ್ರದ, ಬಲಿಜ ಬಂಧು, ಕೈವಾರ ತಾತಯ್ಯ, ಶ್ರೀ ಯೋಗಿ ನಾರೇಯಣ ಯತೀಂದ್ರರ ಜಯಂತಿ ಆಚರಿಸಲಾಯಿತು.

<><><>

ಎಸ್.ಎಸ್.ಎಲ್.ಸಿ. ಸೇರಿದಂತೆ, 5, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆಗಳು ನಿನ್ನೆಯಿಂದ ಆರಂಭಗೊಂಡಿವೆ. ಹೈಕೋರ್ಟ್ ತೀರ್ಪಿನ ಹಿನ್ನೆಲೆ, ಬಾಕಿ ಉಳಿದಿದ್ದ ಇತರೆ ತರಗತಿಗಳ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ವಿಕ್ರಮ್ ಲ್ಯಾಂಡರ್ ಇಳಿದ ಸ್ಥಳ, 'ಶಿವಶಕ್ತಿ' ಹೆಸರಿಗೆ, ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಒಕ್ಕೂಟದಿಂದ ಮಾನ್ಯತೆ.
- ಕಾನೂನು ಸೇವೆ ಪಡೆಯಲು ಅರ್ಹರಾದವರಿಗೆ, ಪ್ರಾಧಿಕಾರದಿಂದ ಉಚಿತ ನೆರವು – ನ್ಯಾಯಮೂರ್ತಿ ಸಂಜೀವ್ ಖನ್ನಾ.
- ಧಾರವಾಡ ಸೇರಿದಂತೆ, ಕಿತ್ತೂರು ಹಾಗೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಇಂದು ರಂಗ ಪಂಚಮಿ.
- 18ನೇ ಲೋಕಸಭಾ ಚುನಾವಣೆ: ಬಾಗಲಕೋಟೆ ಜಿಲ್ಲೆ ಅಮೀನಗಡದಲ್ಲಿ ಗಮನ ಸೆಳೆದ, ಸ್ವೀಪ್ ಹಲಗೆ ಹಬ್ಬ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.